Akashvani: Bangalore
National Bulletin In Kannada
26.11.2026: 7.35AM

ರಾಷ್ಟ್ರೀಯ ವಾರ್ತೆಗಳು
26.11.2026: 7.35AM
****

ಮುಖ್ಯಾಂಶಗಳು :

1. ಇಂದು ದೇಶಾದ್ಯಂತ ಸಂವಿಧಾನ ದಿನ ಆಚರಣೆ; ಸಂವಿಧಾನ ಪೀಠಿಕೆ, ಸಾಮೂಹಿಕ ಓದು ಸೇರಿ ದೇಶಾದ್ಯಂತ ವಿವಿಧ ಜಾಗೃತಿ ಕಾರ್ಯಕ್ರಮಗಳ ಆಯೋಜನೆ
2. ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಪ್ರಗತಿ ಸಭೆ: ಯೋಜನೆಗಳ ಸಮಯೋಚಿತ ಅನುಷ್ಠಾನಕ್ಕೆ ಕರೆ
3. ಮತದಾರರ ಪಟ್ಟಿಯಲ್ಲಿನ ದೋಷ ಸರಿಪಡಿಸಲು ೨೫ ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳಿಗೆ ಚುನಾವಣಾ ಆಯೋಗ ಸೂಚನೆ
4. ವಿಶ್ವ ಚೆಸ್ ಚಾಂಪಿಯನ್ ಷಿಪ್: ಎರಡನೇ ಸುತ್ತಿನಲ್ಲಿ ಡ್ರಾ ಸಾಧಿಸಿದ ಗುಕೇಶ್ -ಸಿಂದರೋವ್

****

ಭಾರತದ ಸಂವಿಧಾನವನ್ನು ಸಂವಿಧಾನ ಸಭೆಯು ೧೯೪೯ರ ನವೆಂಬರ್ ೨೬ರಂದು ಅಂಗೀಕರಿಸಿದ ಸ್ಮರಣಾರ್ಥ ಇಂದು ದೇಶಾದ್ಯಂತ ಸಂವಿಧಾನ ದಿನವನ್ನು ಆಚರಿಸಲಾಗುತ್ತಿದೆ. ೨೦೧೫ರಿಂದ ಸಂವಿಧಾನ ದಿನವನ್ನು ಆಚರಿಸಲಾಗುತ್ತಿದ್ದು, ಸಂವಿಧಾನದಲ್ಲಿ ಪ್ರತಿಪಾದಿಸಿರುವ ತತ್ವಗಳು ಮತ್ತು ಮೌಲ್ಯಗಳನ್ನು ಸ್ಮರಿಸುವುದು ಹಾಗೂ ಅವುಗಳ ಆಶಯಗಳನ್ನು ಎತ್ತಿಹಿಡಿಯುವ ಬದ್ಧತೆಯನ್ನು ಪುನರುಚ್ಚರಿಸುವುದು ಈ ದಿನಾಚರಣೆಯ ಉದ್ದೇಶವಾಗಿದೆ. ಸಂವಿಧಾನದ ಕುರಿತು ಜಾಗೃತಿ ಮೂಡಿಸುವುದು, ಜವಾಬ್ದಾರಿಯುತ ನಾಗರಿಕತ್ವವನ್ನು ಉತ್ತೇಜಿಸುವುದು ಹಾಗೂ ದೇಶದ ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ಎತ್ತಿಹಿಡಿಯುವಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಜನರನ್ನು ಪ್ರೇರೇಪಿಸುವುದು ಈ ಆಚರಣೆಯ ಆಶಯವಾಗಿದೆ. ಈ ಸಂದರ್ಭದಲ್ಲಿ, ಸಂಸತ್ತಿನ ವ್ಯವಹಾರಗಳ ಸಚಿವಾಲಯವು ಮೈಗವ್ ಪೋರ್ಟಲ್ ಮೂಲಕ ಸಂವಿಧಾನದ ಪೀಠಿಕೆಯನ್ನು ೨೩ ಭಾಷೆಗಳಲ್ಲಿ ಆನ್‌ಲೈನ್‌ನಲ್ಲಿ ಓದುವ ಕಾರ್ಯಕ್ರಮವನ್ನು ಆಯೋಜಿಸಲಿದೆ. ಇದರಲ್ಲಿ ೨೨ ಪರಿಶಿಷ್ಟ ಭಾಷೆಗಳು ಮತ್ತು ಇಂಗ್ಲಿಷ್ ಭಾಷೆ ಸೇರಿವೆ. ದಿನಾಚರಣೆಯ ಅಂಗವಾಗಿ ಕೇಂದ್ರ ಸರ್ಕಾರದ ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳು, ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳ ಸರ್ಕಾರಗಳು, ಸ್ವಾಯತ್ತ ಸಂಸ್ಥೆಗಳು ಮತ್ತು ವಿವಿಧ ಸಂಘ-ಸಂಸ್ಥೆಗಳ ವತಿಯಿಂದ ದೇಶಾದ್ಯಂತ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಸಂವಿಧಾನ ಮತ್ತು ದೇಶದ ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ಅದರ ಮಹತ್ವದ ಕುರಿತು ಅರಿವು ಮೂಡಿಸಲು ಡಿಜಿಟಲ್ ವೇದಿಕೆಗಳು ಹಾಗೂ ಸಮುದಾಯ ಆಧಾರಿತ ಉಪಕ್ರಮಗಳ ಮೂಲಕವೂ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ಇದೇ ಸಂದರ್ಭದಲ್ಲಿ, ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಅಧೀನದಲ್ಲಿರುವ ಡಾ. ಅಂಬೇಡ್ಕರ್ ಪ್ರತಿಷ್ಠಾನವು ನವದೆಹಲಿಯ ಡಾ. ಅಂಬೇಡ್ಕರ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ಇಂದು ಸಂವಿಧಾನ ದಿನಾಚರಣೆ ಕಾರ್ಯಕ್ರಮ ಆಯೋಜಿಸಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ಡಾ. ವೀರೇಂದ್ರ ಕುಮಾರ್ ಹಾಗೂ ಭಾರತದ ಮಾಜಿ ಮುಖ್ಯ ನ್ಯಾಯಮೂರ್ತಿ ಉದಯ್ ಉಮೇಶ್ ಲಲಿತ್ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ನ್ಯಾಯಮೂರ್ತಿ ಲಲಿತ್ ಅವರು ಸಂವಿಧಾನದ ಪೀಠಿಕೆಯನ್ನು ಸಾಮೂಹಿಕವಾಗಿ ಓದುವ ಕಾರ್ಯಕ್ರಮಕ್ಕೆ ನೇತೃತ್ವ ವಹಿಸಲಿದ್ದು, 'ಸಾಂವಿಧಾನಿಕ ಆಡಳಿತ ಮತ್ತು ಡಾ. ಬಿ.ಆರ್. ಅಂಬೇಡ್ಕರ್ ಅವರ ಪರಂಪರೆ' ವಿಷಯದ ಕುರಿತು ಸಂವಿಧಾನ ದಿನದ ಉಪನ್ಯಾಸ ನೀಡಲಿದ್ದಾರೆ.

****

ಸಂವಿಧಾನ ದಿನದ ಅಂಗವಾಗಿ ಕರ್ನಾಟಕದ ಬೆಂಗಳೂರು ಮತ್ತು ಮೈಸೂರಿನಲ್ಲಿ ಇಂದು ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಧಾನಸೌಧದ ಮುಂಭಾಗ ಡಾ. ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ಬೆಳಿಗ್ಗೆ ನಮನ ಸಲ್ಲಿಸಲಿದ್ದಾರೆ. ಈ ವೇಳೆ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ಸಂಪುಟ ದರ್ಜೆಯ ಸಚಿವರು ಹಾಗೂ

ಹಿರಿಯ ಅಧಿಕಾರಿಗಳು ಉಪಸ್ಥಿತರಿರಲಿದ್ದಾರೆ. ಬಳಿಕ ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ರಾಜ್ಯ ಮಟ್ಟದ ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಎಲ್ಲಾ ಸಚಿವರು, ಶಾಸಕರು ಪಾಲ್ಗೊಳ್ಳಲಿದ್ದಾರೆ.

****

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಿನ್ನೆ 'ಪ್ರಗತಿ'ಯ ೫೫ನೇ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಭೆಯು 'ಪ್ರಗತಿ'ಯು ಸಕ್ರಿಯ ಆಡಳಿತ ಮತ್ತು ಸಮಯೋಚಿತ ಅನುಷ್ಠಾನವನ್ನು ಉತ್ತೇಜಿಸುವ ಗುರಿಯನ್ನು ಹೊಂದಿರುವ ಒಂದು ಬಹು-ಮಾದರಿ ವೇದಿಕೆಯಾಗಿದೆ. ಸಭೆಯಲ್ಲಿ ಪ್ರಧಾನಿ, ರಸ್ತೆ, ವಿದ್ಯುತ್, ಕಲ್ಲಿದ್ದಲು ಮತ್ತು ರೈಲು ಕ್ಷೇತ್ರಗಳಲ್ಲಿ ಒಟ್ಟು ೭೮ ಸಾವಿರ ಕೋಟಿ ರೂಪಾಯಿಗಳಿಗಿಂತ ಹೆಚ್ಚು ವೆಚ್ಚದ ಐದು ಪ್ರಮುಖ ಮೂಲಸೌಕರ್ಯ ಯೋಜನೆಗಳನ್ನು ಪರಿಶೀಲಿಸಿದರು. ಈ ಯೋಜನೆಗಳ ಸಮಯೋಚಿತ ಅನುಷ್ಠಾನಕ್ಕೆ ಉನ್ನತ ಮಟ್ಟದ ನಿರ್ಮಾಣ ಗುಣಮಟ್ಟವೂ ಇರಬೇಕು ಎಂದು ಪ್ರಧಾನಮಂತ್ರಿ ಹೇಳಿದರು.ಕೈಗಾರಿಕಾ ತರಬೇತಿ ಸಾಂಸ್ಥಿಕ ಪರಿಸರವನ್ನು ಪರಿಶೀಲಿಸಿದ ಪ್ರಧಾನಿ, ರಾಜ್ಯಗಳು, ಐಟಿಐಗಳು ಮತ್ತು ಕೈಗಾರಿಕೆಗಳ ನಡುವೆ ಸಹಕಾರಕ್ಕೆ ಕರೆ ನೀಡಿದರು. ಪ್ರಧಾನಮಂತ್ರಿ ಸಾರ್ವಜನಿಕ ಕ್ಷೇತ್ರದ ಸಂಸ್ಥೆಗಳನ್ನು ಭವಿಷ್ಯದ ಮಾನವ ಸಂಪನ್ಮೂಲ ಅಗತ್ಯಗಳನ್ನು ಮೌಲ್ಯಮಾಪನ ಮಾಡಿ, ಸಂಬಂಧಿತ ವೃತ್ತಿಗಳಲ್ಲಿ ತರಬೇತಿ ಮತ್ತು ನೇಮಕಾತಿಗಾಗಿ ಐಟಿಐ ಗಳೊಂದಿಗೆ ಸಂಪರ್ಕಗಳನ್ನು ಬಲಪಡಿಸಲು ಕರೆ ನೀಡಿದರು. ಸ್ಥಳೀಯ ಸಂಬಂಧಿತ ಕೌಶಲ್ಯಗಳ ಸಾಧ್ಯತೆಯನ್ನು ಅವರು ಬಿಂಬಿಸಿದರು. ಇದು ಮನೆಗೆ ಹತ್ತಿರ ಉದ್ಯೋಗಾವಕಾಶಗಳನ್ನು ವಿಸ್ತರಿಸಬಹುದು ಮತ್ತು ಸಂಕಷ್ಟದಿಂದ ಪ್ರೇರಿತ ವಲಸೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ ಎಂದು ಹೇಳಿದರು. ರಸ್ತೆ ಯೋಜನೆಗಳನ್ನು ಪರಿಶೀಲಿಸಿದ ಪ್ರಧಾನಮಂತ್ರಿ, ತ್ವರಿತ ಜಾರಿಗೆ ಕರೆ ನೀಡಿದರಲ್ಲದೆ, ವೆಚ್ಚಗಳಿಗಿಂತ ಫಲಿತಾಂಶಗಳ ಮೇಲೆ ಗಮನಹರಿಸುವ ಅಗತ್ಯವನ್ನು ಹೇಳಿದರು.

****

ಭಾರತದ ಚುನಾವಣಾ ಆಯೋಗವು, ಪ್ರಸ್ತುತ ನಡೆಯುತ್ತಿರುವ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ - ಎಸ್‌ಐಆರ್ ಸಂದರ್ಭದಲ್ಲಿ ಅಸ್ತಿತ್ವದಲ್ಲಿರುವ ಮತದಾರರ ಪಟ್ಟಿಯಲ್ಲಿನ ಹೆಸರು, ಜನ್ಮ ದಿನಾಂಕ ಸೇರಿದಂತೆ ಮತದಾರರ ವಿವರಗಳಲ್ಲಿರುವ ತಪ್ಪುಗಳನ್ನು ಗುರುತಿಸಿ ಸರಿಪಡಿಸುವಂತೆ ೨೫ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾಧಿಕಾರಿಗಳಿಗೆ ಸೂಚಿಸಿದೆ. ಈ ಸಂಬಂಧ ಮುಖ್ಯ ಚುನಾವಣಾಧಿಕಾರಿಗಳಿಗೆ ಪತ್ರ ಬರೆದಿರುವ ಆಯೋಗ, ಮತದಾರರ ವಿವರಗಳಲ್ಲಿನ ದೋಷಗಳನ್ನು ಪತ್ತೆಹಚ್ಚಲು, ಸಂಬಂಧಪಟ್ಟ ಮತದಾರರ ಪ್ರಸ್ತುತ ಚುನಾವಣಾ ವಿವರಗಳನ್ನು ವಿಶೇಷ ತೀವ್ರ ಪರಿಷ್ಕರಣೆ ಸಂದರ್ಭದಲ್ಲಿ ಸಂಗ್ರಹಿಸಲಾದ ಮಾಹಿತಿಯೊಂದಿಗೆ ಹೋಲಿಕೆ ಮಾಡುವಂತೆ ತಿಳಿಸಿದೆ. ಎರಡೂ ಮಾಹಿತಿಗಳಲ್ಲಿ ವ್ಯತ್ಯಾಸ ಕಂಡುಬಂದಲ್ಲಿ, ಅದನ್ನು ಪರಿಶೀಲನೆಗಾಗಿ ಗುರುತಿಸಿ ಅಗತ್ಯ ತಿದ್ದುಪಡಿ ಕ್ರಮ ಕೈಗೊಳ್ಳಬೇಕು ಎಂದು ಆಯೋಗ ಸೂಚಿಸಿದೆ. ಈ ಉದ್ದೇಶಕ್ಕಾಗಿ, ಪ್ರಸ್ತುತ ನಡೆಯುತ್ತಿರುವ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಸಂದರ್ಭದಲ್ಲಿ ಬೂತ್ ಮಟ್ಟದ ಅಧಿಕಾರಿಗಳು-ಬಿಎಲ್‌ಒಗಳು ಸಂಬಂಧಪಟ್ಟ ಮತದಾರರ ಮನೆಗಳಿಗೆ ಭೇಟಿ ನೀಡಿ ವಿವರಗಳನ್ನು ಪರಿಶೀಲಿಸಲಿದ್ದಾರೆ. ಅಗತ್ಯವಿರುವಲ್ಲಿ, ಭರ್ತಿ ಮಾಡಿದ ಮತ್ತು ಸಹಿ ಮಾಡಲಾದ ನಮೂನೆ-೬ ಅನ್ನು ಪಡೆದುಕೊಳ್ಳಲಿದ್ದಾರೆ.ಬಳಿಕ, ಸಹಾಯಕ ಮತದಾರರ ನೋಂದಣಾಧಿಕಾರಿ ಅಥವಾ ಮತದಾರರ ನೋಂದಣಾಧಿಕಾರಿಗಳು ನಿಗದಿತ ಕಾರ್ಯವಿಧಾನದಂತೆ ಅರ್ಜಿಗಳನ್ನು ಪರಿಶೀಲಿಸಿ ವಿಲೇವಾರಿ ಮಾಡಲಿದ್ದಾರೆ ಎಂದು ಚುನಾವಣಾ ಆಯೋಗ ತಿಳಿಸಿದೆ.

****

ಜಂಟಿ ಪ್ರವೇಶ ಪರೀಕ್ಷೆ - ಜೆಇಇ ಮುಖ್ಯ ಪರೀಕ್ಷೆಯ ಮೊದಲ ಅವಧಿಗೆ ಶುಲ್ಕ ಸಹಿತ ನೋಂದಣಿ ಮಾಡಿಕೊಳ್ಳಲು ಇಂದೇ ಕೊನೆಯ ದಿನವಾಗಿದೆ. ರಾಷ್ಟ್ರೀಯ ಪರೀಕ್ಷಾ ಸಂಸ್ಥೆ - ಎನ್‌ಟಿಎ ಸಾಮಾಜಿಕ ಮಾಧ್ಯಮದ ಮೂಲಕ ಈ ಮಾಹಿತಿ ನೀಡಿದ್ದು, ನಿನ್ನೆಯವರೆಗೆ ೧೫ ಲಕ್ಷದ ೭೩ ಸಾವಿರದ ೧೮ ನೋಂದಣಿ ಅರ್ಜಿಗಳು ಸಲ್ಲಿಕೆಯಾಗಿವೆ. ಈ ಪೈಕಿ ೧೩ ಲಕ್ಷದ ೯೬ ಸಾವಿರದ ೭೯೫ ಹೆಚ್ಚು ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸುವ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ ಎಂದು ತಿಳಿಸಿದೆ.

****

ಇದೇ ೨೯ರಂದು ಆಕಾಶವಾಣಿಯಲ್ಲಿ ಪ್ರಸಾರವಾಗಲಿರುವ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ದೇಶ-ವಿದೇಶಗಳಲ್ಲಿರುವ ಸಮಸ್ತ ಭಾರತೀಯರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಈ ಮಾಸಿಕ

ಬಾನುಲಿ ಕಾರ್ಯಕ್ರಮದ ೧೪೦ನೇ ಸಂಚಿಕೆಯಾಗಲಿದೆ. ಕಾರ್ಯಕ್ರಮಕ್ಕಾಗಿ ಜನರು ತಮ್ಮ ಆಲೋಚನೆಗಳು ಮತ್ತು ಸಲಹೆಗಳನ್ನು ಟೋಲ್-ಫ್ರೀ ಸಂಖ್ಯೆ ೧೮೦೦-೧೧-೭೮೦೦ ಮೂಲಕ ಸಲ್ಲಿಸಬಹುದು. ನರೇಂದ್ರ ಮೋದಿ ಆಪ್ ಅಥವಾ ಮೈ ಜಿಒವಿ ಓಪನ್ ಫೋರಮ್ ಮೂಲಕವೂ ಆನ್‌ಲೈನ್‌ನಲ್ಲಿ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಬಹುದು. ನಾಗರಿಕರು, ೧೯೨೨ ಸಂಖ್ಯೆಗೆ ಮಿಸ್ಡ್ ಕಾಲ್ ನೀಡಿ, ಎಸ್‌ಎಂಎಸ್‌ನಲ್ಲಿ ಬರುವ ಲಿಂಕ್ ಅನ್ನು ಅನುಸರಿಸುವ ಮೂಲಕ ಪ್ರಧಾನಮಂತ್ರಿ ಅವರಿಗೆ ನೇರವಾಗಿ ತಮ್ಮ ಸಲಹೆಗಳನ್ನು ನೀಡಬಹುದು. ಮುಂಬರುವ ಸಂಚಿಕೆಗಾಗಿ ಸಾರ್ವಜನಿಕರ ಆಲೋಚನೆಗಳು ಮತ್ತು ಸಲಹೆಗಳನ್ನು ಇದೇ ತಿಂಗಳ ೨೭ರವರೆಗೆ ಸ್ವೀಕರಿಸಲಾಗುವುದು.

****

ಸ್ವಿಜ್ಜರ್ಲಿಂಡ್‌ನ ಜಿನಿವಾದಲ್ಲಿ ನಡೆಯುತ್ತಿರುವ ವಿಶ್ವ ಚೆಸ್ ಚಾಂಪಿಯನ್ ಷಿಪ್ ನಲ್ಲಿ ಕಳೆದ ಬಾರಿಯ ಚಾಂಪಿಯನ್ ಭಾರತದ ಡಿ. ಗುಕೇಶ್ ಮತ್ತು ಉಜ್ಬೇಕಿಸ್ತಾನದ ಜವೋಖಿರ್ ಸಿಂದರೋವ್ ಎರಡನೇ ಸುತ್ತಿನಲ್ಲಿ ಡ್ರಾ ಸಾಧಿಸಿದ್ದಾರೆ. ಇದರೊಂದಿಗೆ ಉಭಯ ಆಟಗಾರರು ತಲಾ ೧ ಅಂಕ ಗಳಿಸಿ ಸಮಬಲ ಸಾಧಿಸಿದ್ದಾರೆ. ಮೊದಲ ಸುತ್ತಿನಲ್ಲಿ ಇಬ್ಬರು ಡ್ರಾಗೆ ತೃಪ್ತಿಪಟ್ಟಿದ್ದರು. ೧೪ ಸುತ್ತುಗಳ ಪಂದ್ಯದಲ್ಲಿ ಇನ್ನೂ ೧೨ ಸುತ್ತುಗಳು ಬಾಕಿ ಇದ್ದು, ಮೊದಲು ೭.೫ ಅಂಕ ಗಳಿಸುವವರು ಚಾಂಪಿಯನ್ ಪಟ್ಟ ಅಲಂಕರಿಸಲಿದ್ದಾರೆ.

****

ಗೋವಾದಲ್ಲಿ ನಡೆಯುತ್ತಿರುವ ೫೬ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ನಿನ್ನೆ, ಇತ್ತೀಚೆಗೆ ಮುಕ್ತಾಯಗೊಂಡ ವೇವ್ಸ್ ಫಿಲ್ಮ್ ಬಜಾರ್‌ನ ಪ್ರಮುಖ ಫಲಿತಾಂಶಗಳನ್ನು ಪ್ರಕಟಿಸಲಾಯಿತು. ಭಾರತೀಯ ಚಿತ್ರರಂಗದ ದಿಗ್ಗಜ ಕಲಾವಿದರ ಸ್ಮರಣಾರ್ಥ ವಿಶೇಷ ಕಾರ್ಯಕ್ರಮಗಳು ಹಾಗೂ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಗಮನ ಸೆಳೆದವು. ಇಂದು ಚಲನಚಿತ್ರೋತ್ಸವದಲ್ಲಿ ಹಲವು ಕುತೂಹಲಕಾರಿ ಸಂವಾದಗಳು ಹಾಗೂ ವಿಶೇಷ ಚಲನಚಿತ್ರ ಪ್ರದರ್ಶನಗಳು ನಡೆಯಲಿದ್ದು, ಚಿತ್ರಪ್ರೇಮಿಗಳಿಗೆ ಮತ್ತೊಂದು ಮನರಂಜನಾತ್ಮಕ ದಿನವಾಗಲಿದೆ.

****

ಮಧ್ಯಪ್ರದೇಶದ ಭೋಪಾಲ್‌ನಲ್ಲಿ ನಡೆಯುತ್ತಿರುವ ಮಹಿಳೆಯರ ಏಷ್ಯನ್ ಚಾಂಪಿಯನ್ಸ್ ಟ್ರೋಫಿ ಹಾಕಿ ಟೂರ್ನಿಯ ತನ್ನ ಐದನೇ ಪಂದ್ಯದಲ್ಲಿ ಭಾರತ ತಂಡ ೪-೦ ಗೋಲ್ ಗಳ ಅಂತರದಿಂದ ಜಪಾನ್ ತಂಡವನ್ನು ಮಣಿಸಿದೆ. ಇದರೊಂದಿಗೆ ಆಡಿದ ಎಲ್ಲಾ ೫ ಪಂದ್ಯಗಳಲ್ಲಿ ಅಜೇಯ ದಾಖಲೆ ಕಾಯ್ದುಕೊಂಡಿರುವ ಭಾರತ ತಂಡ, ಲೀಗ್ ಅಂತ್ಯಕ್ಕೆ ಅಗ್ರಸ್ಥಾನಿಯಾಗಿ ಹೊರಹೊಮ್ಮಿದೆ. ಈಗಾಗಲೇ ಸೆಮಿಫೈನಲ್ ಪ್ರವೇಶಿಸಿರುವ ಭಾರತ ತಂಡದ ಪರ ದೀಪಿಕಾ ಅವಳಿ ಗೋಲ್ ಗಳಿಸುವ ಮೂಲಕ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರವಹಿಸಿದರು.

****